# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಲೆಕ್ಕಶೀರ್ಷಿಕೆ: 2515-00-101-0-11ರಡಿ ಒದಗಿಸಿರುವ ಅನುದಾನದಲ್ಲಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

ಓದಲಾಗಿದೆ:

1. ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಇವರ ಪತ್ರ ಸಂಖ್ಯೆ:ರಾಚುಆ.01.ಲೆಕ್ಕ.2021, ದಿನಾಂಕ:21-04-2021.
2. ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2021, ದಿನಾಂಕ:05-04-2021.

ಪ್ರಸ್ತಾವನೆ:

ರಾಜ್ಯ ಚುನಾವಣಾ ಆಯೋಗವು ಖಜಾನೆ-2ರಲ್ಲಿ ವಹಿವಾಟು ನಡೆಸುತ್ತಿರುವುದರಿಂದ, ಆರ್ಥಿಕ ಇಲಾಖೆಯಿಂದ 2021-22ನೇ ಸಾಲಿಗೆ ನೀಡಿರುವ ಅನುದಾನದಲ್ಲಿ ಚುನಾವಣಾ ವೆಚ್ಚಗಳಿಗೆ ಸಂಬಂಧಪಟ್ಟಂತೆ ಕೆಳಕಂಡ ಲೆಕ್ಕಶೀರ್ಷಿಕೆಯಡಿಯಲ್ಲಿ ತ್ರೈಮಾಸಿಕ ಕಂತಿನ ಅನುದಾನವನ್ನು ಖಜಾನೆ-2 ರ ಮುಖಾಂತರ ತುರ್ತಾಗಿ ರಾಜ್ಯ ಚುನಾವಣಾ ಆಯೋಗಕ್ಕೆ ಬಿಡುಗಡೆ ಮಾಡಬೇಕೆಂದು ಮೇಲೆ ಓದಲಾದ (1)ರ ಪತ್ರದಲ್ಲಿ ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| HOA : 2515-00-101-0-11 | | | |
|---|---|---|---|
| **Obj Code** | **Description** | **FD Alloted Budget** | **Budget to Release** |
| 059 | OTHER EXPENSES | 168,22,40,000 | 42,05,60,000 |

2021-22ನೇ ಸಾಲಿನಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಉಲ್ಲೇಖಿತ ಲೆಕ್ಕ ಶೀರ್ಷಿಕೆ: **2515-00-101-0-11(059-ಇತರೆ ಖರ್ಚುಗಳು)** ರಡಿ ರೂ.16822.40 ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ.

ಪ್ರಸ್ತುತ ಯಾವುದೇ ಚುನಾವಣೆ ಪ್ರಕ್ರಿಯೆ ಇಲ್ಲದಿರುವುದರಿಂದ, ಮೇಲೆ ಓದಲಾದ(1)ರ ರಾಜ್ಯ ಚುನಾವಣಾ ಆಯೋಗದ ದಿನಾಂಕ:21-04-2021ರ ಪತ್ರದಲ್ಲಿ ಕೋರಲಾದಂತೆ, 2021-22ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ: **2515-00-101-0-11** ರಡಿ ನಿಗಧಿಪಡಿಸಲಾದ ರೂ.16822.40 ಲಕ್ಷಗಳ ಅನುದಾನದಲ್ಲಿ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2021, ದಿನಾಂಕ:05-04-2021ರನ್ವಯ ರೂ. 25,00,000 (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

vivo Y20i

2..

Fast PDF Scanner

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 208 ಜಿಪಸ 2021, ಬೆಂಗಳೂರು, ದಿನಾಂಕ:08-06-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಲೆಕ್ಕ ಶೀರ್ಷಿಕೆ: 2515-00-101-0-11(059-ಇತರೆ ಖರ್ಚುಗಳು) ರಡಿ ಒದಗಿಸಲಾಗಿರುವ ರೂ.16822.40 ಲಕ್ಷಗಳ ಅನುದಾನದಲ್ಲಿ ರೂ. 25,00,000 (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಅಭಿಪ್ರಾಯದನ್ವಯ ಹಾಗೂ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2021, ದಿನಾಂಕ:05-04-2021ರಲ್ಲಿ ಆಡಳಿತ ಇಲಾಖೆಗಳ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

B. Naveenkumar 08/06/21

(ಬಿ. ನವೀನ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

08/06/2021.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ, ನಂ-8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.
5. ಉಪಕಾರ್ಯದರ್ಶಿ, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
6. ಮೇಲ್ವಿಚಾರಕರು, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.
3. [illegible]ಶಕರು(ಪಂ.ರಾಜ್-2)ರವರ ಆಪ್ತ ಸಹಾಯಕ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

Fast PDF Scanner